# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1450 |
| ಸದಸ್ಯರ ಹೆಸರು | : | ಶ್ರೀಮತಿ ಬಲ್ಕೀಸ್ ಬಾನು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20.03.2025 |
| ಉತ್ತರಿಸುವ ಸಚಿವರು | : | ಮಾನ್ಯ ಗೃಹ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ಆನ್‌ಲೈನ್ ಗೇಮ್‌ಗಳಿಗೆ ಅಂಟಿಕೊಂಡು ಆಡುವವರ ಸಂಖ್ಯೆ ಜಾಸ್ತಿಯಾಗಿದ್ದು, ಇಂದಿನ ಯುವಕರು ಆನ್‌ಲೈನ್ ಗೇಮ್‌ಗೆ ತಮ್ಮ ಜೀವನವನ್ನೇ ಹಾಳು ಮಾಡಿಕೊಳ್ಳುತ್ತಿರುವುದಲ್ಲದೇ ತಮ್ಮ ಜೀವನವನ್ನೇ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಬಂದಿದೆ. |
| ಆ) | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಆನ್ ಲೈನ್ ಗೇಮ್ ಗೀಳಿನಿಂದ ಹಣ ಕಳೆದುಕೊಂಡು ಆತ್ಮಹತ್ಯೆ ಪ್ರಯತ್ನ ಹಾಗೂ ಆತ್ಮಹತ್ಯೆ ಮಾಡಿಕೊಂಡಿರುವವರ ಸಂಖ್ಯೆ ಎಷ್ಟು? | ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಆನ್‌ಲೈನ್ ಗೇಮ್ ಗೀಳಿನಿಂದ ಹಣ ಕಳೆದುಕೊಂಡು ಆತ್ಮಹತ್ಯೆ ಪ್ರಯತ್ನ ಹಾಗೂ ಆತ್ಮಹತ್ಯೆ ಮಾಡಿಕೊಂಡಿರುವವರ ವರ್ಷವಾರು ಮಾಹಿತಿ ಕೆಳಗಿನಂತಿದೆ:- |

| ಕ್ರ. ಸಂ. | ವರ್ಷ | ಆತ್ಮಹತ್ಯೆಗೆ ಪ್ರಯತ್ನ ಮಾಡಿಕೊಂಡವರ ಸಂಖ್ಯೆ | ಆತ್ಮಹತ್ಯೆ ಮಾಡಿಕೊಂಡವರ ಸಂಖ್ಯೆ |
|---|---|---|---|
| 1 | 2023 | 0 | 8 |
| 2 | 2024 | 0 | 6 |
| 3 | 2025 | 0 | 4 |
| | **ಒಟ್ಟು** | **0** | **18** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಇ) | ಆನ್‌ಲೈನ್ ಗೇಮ್ ರದ್ದುಪಡಿಸಲು ಅಥವಾ ನಿಯಂತ್ರಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು) | ಆನ್‌ಲೈನ್ ಗೇಮ್ಸ್ ಮತ್ತು ಆನ್‌ಲೈನ್ ಜೂಜನ್ನು ತಡೆಗಟ್ಟಲು ಸರ್ಕಾರವು ಕೆಳಕಂಡಂತೆ ಕ್ರಮ ವಹಿಸಿದೆ:-<br>1. ಅನ್‌ಲೈನ್ ಗೇಮ್ಸ್ ಮತ್ತು ಆನ್‌ಲೈನ್ ಜೂಜಾಡುವ ಮಾಹಿತಿ ಸಂಗ್ರಹಿಸಿ ದಾಳಿಗಳನ್ನು ಕೈಗೊಂಡು ಪ್ರಕರಣಗಳನ್ನು ದಾಖಲಿಸಿ ಆರೋಪಿತರ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣ ಪತ್ರ ಸಲ್ಲಿಸಲಾಗುತ್ತಿದೆ. |

| | | |
|---|---|---|
| | | 2. ಅಕ್ರಮ ಆನ್‌ಲೈನ್ ಜೂಜಾಟ/ ಗೇಮ್ಸ್ ಆಡುವವರು ಕಂಡು ಬಂದಲ್ಲಿ ಪೊಲೀಸ್ ಸಹಾಯವಾಣಿಗೆ ಕರೆ ಮಾಡಿ ಮಾಹಿತಿಯನ್ನು ತಿಳಿಸುವಂತೆ ತಿಳುಳಿಕೆ ನೀಡಲಾಗಿದೆ.<br>3. ಸಾರ್ವಜನಿಕರಲ್ಲಿ ಬೆಟ್ಟಿಂಗ್ ದಂಧೆಯಲ್ಲಿ ಪಾಲ್ಗೊಳ್ಳಬಾರದೆಂದು ಜಾಗೃತಿ ಮೂಡಿಸಲಾಗಿರುತ್ತದೆ.<br>4. ಪೊಲೀಸ್ ಘಟಕ ವ್ಯಾಪ್ತಿಯ ಸರಹದ್ದು ಎಲ್ಲಾ ಪೊಲೀಸ್ ಠಾಣೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ ಸಿಬ್ಬಂದಿಗಳಿಗೆ ತಮ್ಮ ತಮ್ಮ ಠಾಣಾ ಬೀಟ್ ವ್ಯಾಪ್ತಿಯಲ್ಲಿ ಗುಪ್ತ ಮಾಹಿತಿಯನ್ನು ಸಂಗ್ರಹಿಸಿ ಯಾರಾದರು ಬೆಟ್ಟಿಂಗ್ ದಂಧೆ ನಡೆಸುವವರು ಇದ್ದಲ್ಲಿ ಮಾಹಿತಿಯನ್ನು ಮೇಲಾಧಿಕಾರಿಗಳ ಗಮನಕ್ಕೆ ತರಲು ಸೂಚಿಸಿರುತ್ತದೆ.<br>5. ಎಲ್ಲಾ ಪೊಲೀಸ್ ಠಾಣೆಗಳ ಠಾಣಾಧಿಕಾರಿಗಳಿಗೆ ಹಾಗೂ ಉಪ ವಿಭಾಗಾಧಿಕಾರಿಗಳಿಗೆ ಗುಪ್ತ ಮಾಹಿತಿ ಕರ್ತವ್ಯ ಮತ್ತು ಅಪರಾಧ ಕರ್ತವ್ಯ ನಿರ್ವಹಿಸುವ ಸಿಬ್ಬಂದಿಗಳಿಗೆ ಆನ್‌ಲೈನ್ ಬೆಟ್ಟಿಂಗ್ ದಂಧೆ ನಡೆಸುವವರ ನಿಖರವಾದ ಮಾಹಿತಿಯನ್ನು ಸಂಗ್ರಹಿಸಿ ದಾಳಿ ನಡೆಸಿ ಸೂಕ್ತ ಕಾನೂನು ಕ್ರಮ ಜರುಗಿಸಲು ಕ್ರಮ ಕೈಗೊಳ್ಳಲು ಸೂಚಿಸಲಾಗಿರುತ್ತದೆ.<br><br>ರಾಜ್ಯದ ಹಲವು ಜಿಲ್ಲೆಗಳಲ್ಲಿ ಚಾಲ್ತಿಯಲ್ಲಿರುವ ಆನ್‌ಲೈನ್ ಬೆಟ್ಟಿಂಗ್ ಅಪ್ಲಿಕೇಶನ್‌ಗಳ ಮಾಹಿತಿ ಹಾಗೂ ದಾಖಲಾದ ಪ್ರಕರಣಗಳ ಮಾಹಿತಿಯನ್ನು ಹಾಗೂ ಆನ್‌ಲೈನ್ ಗೇಮ್‌ಗಳನ್ನು ನಿರ್ಬಂಧಿಸುವ ಕುರಿತಂತೆ ಕರ್ನಾಟಕ ಪೊಲೀಸ್ ಕಾಯ್ದೆ, 1963ರ ಕಲಂ 78, 79, 80, 87, 114, 128ಎ ಹಾಗೂ 176 ಗಳಿಗೆ ಕೆಲವು ತಿದ್ದುಪಡಿ ಮಾಡಲು ತೀರ್ಮಾನಿಸಿ, The Karnataka Police (Amendment) Act, 2000 (Central Act 21 of 2000) ರಲ್ಲಿನ ತಾಂತ್ರಿಕ ಅಂಶಗಳನ್ನು ಸೇರ್ಪಡೆಗೊಳಿಸಲಾಗಿತ್ತು. ಈ ಸಂಬಂಧ ಆನ್‌ಲೈನ್ ಗೇಮ್ ಸಂಸ್ಥೆಗಳು ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ W.P.No.18703/2021 (GM-Police) ದಾಖಲಿಸಲಾಗಿ, ಮಾನ್ಯ ಉಚ್ಚ ನ್ಯಾಯಾಲಯವು ಸರ್ಕಾರವು ತಿದ್ದುಪಡಿ ಮಾಡಲಾಗಿದ್ದ ಆದೇಶವನ್ನು ದಿನಾಂಕ:14.02.2022 ರಂದು ರದ್ದುಗೊಳಿಸಿರುತ್ತದೆ. ಮಾನ್ಯ ಉಚ್ಚ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ Civil Appeal No.6132/2023ನ್ನು ದಾಖಲಿಸಿದ್ದು, ಪ್ರಕರಣವು ಬಾಕಿಯಿರುತ್ತದೆ. |

ಸಂಖ್ಯೆ: 145 ಎಸ್‌ಎಸ್‌ಟಿ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು